ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 26–09–2017

## ಪತ್ರಿಕಾ ಆಮಂತ್ರಣ

1. ಪ್ರವಾಸೋದ್ಯಮ ಇಲಾಖೆಯ ವತಿಯಿಂದ "ಪುನೀತ ಯಾತ್ರೆ" ಕಾರ್ಯಕ್ರಮ:

**ಲೋಕಾರ್ಪಣೆ:**

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 27–09–2017 ಬುಧವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ.

ಸ್ಥಳ: ಕೊಠಡಿ ಸಂಖ್ಯೆ 313, ವಿಧಾನಸೌಧ, ಬೆಂಗಳೂರು.

2. 15 ದಿನಗಳ ಪರ್ವತಾರೋಹಣ ತರಬೇತಿ ಕಾರ್ಯಕ್ರಮ:

ಚಾಲನೆ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 27–09–2017 ಬುಧವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ.

ಸ್ಥಳ: ಗ್ರಾಂಡ್ ಸ್ಟೆಪ್ ಮುಂಭಾಗ, ವಿಧಾನಸೌಧ, ಬೆಂಗಳೂರು.

ಸಂಖ್ಯೆ 127/247

## ಪತ್ರಿಕಾ ಪ್ರಕಟಣೆ

# ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ–2017 ಪ್ರಶಸ್ತಿಗೆ ಹೆಚ್.ಎಸ್. ದೊರೆಸ್ವಾಮಿ ಆಯ್ಕೆ

ಬೆಂಗಳೂರು, ಸೆಪ್ಟೆಂಬರ್ 26 ( ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ಸರ್ಕಾರ ನೀಡುವ ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ –2017 ಪ್ರಶಸ್ತಿಗೆ ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಹೆಚ್. ಎಸ್. ದೊರೆಸ್ವಾಮಿ ಅವರನ್ನು ಆಯ್ಕೆಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮುಖಾಂತರ ಕಳೆದ ನಾಲ್ಕು ವರ್ಷಗಳಿಂದ ಈ ಪ್ರಶಸ್ತಿಯನ್ನು ನೀಡುತ್ತಾ ಬಂದಿದ್ದು, ಪ್ರಸ್ತುತ ಸಾಲಿನ ಪ್ರಶಸ್ತಿಗೆ ಹೆಚ್. ಎಸ್. ದೊರೆಸ್ವಾಮಿ ಅವರು ಆಯ್ಕೆಯಾಗಿದ್ದು, ಪ್ರಶಸ್ತಿ ಪ್ರದಾನ ಸಮಾರಂಭವನ್ನು ರಾಷ್ಟ್ರಪಿತ ಮಹಾತ್ಮ ಗಾಂಧೀ ಜಯಂತಿ ಅಕ್ಟೋಬರ್ 2 ರಂದು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಸಂಜೆ 6.00 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿಗಳು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

'ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ' ಪ್ರಶಸ್ತಿಗಾಗಿ ಅರ್ಹರನ್ನು ಆಯ್ಕೆಮಾಡಲು ನಿವೃತ್ತ ನ್ಯಾಯಮೂರ್ತಿ ಶ್ರೀ ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಈ ಪ್ರಶಸ್ತಿಯು ಐದು ಲಕ್ಷ ರೂ. ಗಳನ್ನು ಒಳಗೊಂಡಿರುತ್ತದೆ.

*****

ಜೆಡಿ:ಜಿಪಿಆರ್

## <u>ವ್ಯಕ್ತಿ ಪರಿಚಯ:</u>

## <u>ಹಾರೋಹಳ್ಳಿ ಶ್ರೀನಿವಾಸಯ್ಯ ದೊರೆಸ್ವಾಮಿ:</u>

ಹಾರೋಹಳ್ಳಿ ಶ್ರೀನಿವಾಸಯ್ಯ ದೊರೆಸ್ವಾಮಿ ಅವರು 10–4–1918 ರಲ್ಲಿ ಮೈಸೂರಿನ ಹಾರೋಹಳ್ಳಿಯಲ್ಲಿ ಜನಿಸಿದರು. ತಂದೆ ಶ್ರೀನಿವಾಸ ಅಯ್ಯರ್, ತಾಯಿ ಪದ್ಮಾವತಮ್ಮ. ತಮ್ಮ ಪ್ರಾಥಮಿಕ ವಿದ್ಯಾಭ್ಯಾಸವನ್ನು ಹಾರೋಹಳ್ಳಿಯಲ್ಲಿ ಮುಗಿಸಿದ ದೊರೆಸ್ವಾಮಿ ಬೆಂಗಳೂರಿನ ಸೆಂಟ್ರಲ್ ಕಾಲೇಜಿನಲ್ಲಿ ಪದವಿಯನ್ನು ಮುಗಿಸಿದ ಅವರು ತಮ್ಮ ವಿದ್ಯಾಭ್ಯಾಸದ ವೇಳೆಯಲ್ಲೇ ಸ್ವಾತಂತ್ರ್ಯ ಚಳುವಳಿಯಲ್ಲಿ ಅವರು ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಹಾರೋಹಳ್ಳಿ ಶ್ರೀನಿವಾಸಯ್ಯ ದೊರೆಸ್ವಾಮಿ ಅವರು ಹಿರಿಯ ಸ್ವಾತಂತ್ರ್ಯ ಹೋರಾಟಗಾರರಾಗಿ, ಗಾಂಧೀವಾದಿಗಳಾಗಿ, ಸಾಮಾಜಿಕ ಹೋರಾಟಗಾರರಾಗಿ ಹಾಗೂ ಪತ್ರಕರ್ತರಾಗಿ ಹೆಸರು ಮಾಡಿದವರು ಪ್ರಸುತ್ತ 2017 ನೇ "ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ" ಕರ್ನಾಟಕ ಪ್ರಶಸ್ತಿಗೆ ಆಯ್ಕೆಯಾಗಿರುತ್ತಾರೆ.

ಎಚ್.ಎಸ್. ದೊರೆಸ್ವಾಮಿ ಅವರು ಬಾಲ್ಯದಲ್ಲೇ ಬೆಂಗಳೂರಿನಲ್ಲಿ ಬಂದು ನೆಲಸಿದರು. ಮಹಾತ್ಮಗಾಂಧಿಯವರ 'ಮೈ ಅರ್ಲಿ ಲೈಫ್" ಪುಸ್ತಕದಿಂದ ಪ್ರೇರಣೆಗೊಂಡು, ಭಾರತದ ಸ್ವಾತಂತ್ರ್ಯ ಸಂಗ್ರಾಮಕ್ಕೆ ಸೇರಿದರು. 1942 ರಲ್ಲಿ ಬಿಎಸ್ಸಿ ಪೂರ್ಣಗೊಳಿಸಿ, ಕೆಲಕಾಲ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದರು. ಅದೇ ವರ್ಷ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಅವರ ಸಹೋದರ ಹೆಚ್.ಎಸ್. ಸೀತಾರಾಮ್, ಸರದಾರ್ ವೆಂಕಟರಾಮಯ್ಯ ಮುಂತಾದವರ ಜೊತೆಗೆ ಭಾಗವಹಿಸಿದರು. ನಂತರ ಅವರ ಸಹೋದರ ಎಚ್.ಎಸ್. ಸೀತಾರಾಮ್ ಮೇಯರ್ ಆಗಿಯೂ ಆಯ್ಕೆಯಾದರು. ಬ್ರಿಟೀಷ್ ಸರ್ಕಾರದ ದಾಖಲೆಗಳನ್ನು ನಾಶಪಡಿಕಸುವ ನಿಟ್ಟಿನಲ್ಲಿ ಟೈಮ್ ಬಾಂಬ್ ತಯಾರಿಕೆಯಲ್ಲಿ ಇವರ ಸ್ನೇಹಿತರ ಗುಂಪು ತೊಡಗಿದ್ದರಿಂದ ಮೊದಲ ಬಾರಿಗೆ 14 ತಿಂಗಳ ಸೆರೆಮನೆವಾಸ ಅನುಭವಿಸಿದರು. ಗಾಂಧೀಜಿಯವರು ತೋರಿಸಿಕೊಟ್ಟ ಅಹಿಂಸೆ ಮತ್ತು ಸತ್ಯಾಗ್ರಹದ ಮಾರ್ಗದಲ್ಲಿ ನಡೆಯಲು ನಿರ್ಧರಿಸಿದರು. ನಂತರದ ದಿನದಲ್ಲಿ ಪುಸ್ತಕ ಅಂಗಡಿ ಪ್ರಾರಂಭಿಸಿದರು. ಖ್ಯಾತ ಸಾಹಿತಿಗಳಾದ ಆರ್. ಕೆ. ನಾರಾಯಣ ಹಾಗೂ ಕೆ.ಎಸ್.ನರಸಿಂಹಸ್ವಾಮಿ ಅವರು ಈ ಪುಸ್ತಕ ಮಳಿಗೆಗೆ ಆಗಾಗ್ಗೆ ಭೇಟಿ ನೀಡುತ್ತಿದ್ದರು.

1947 ರಲ್ಲಿ ಪತ್ರಿಕೆ ಪ್ರಾರಂಭಿಸಿ ಮೈಸೂರು ಚಲೋ ಚಳುವಳಿ ಕುರಿತು ಲೇಖನಗಳನ್ನು ಬರೆದರು. ನಂತರ ಸರ್ಕಾರ ಪತ್ರಿಕೆಯನ್ನು ಮುಟ್ಟುಗೋಲು ಹಾಕಿತು.

2014 ರಲ್ಲಿ ಬೆಂಗಳೂರಿನಲ್ಲಿ ಭೂ ಕಬಳಿಕೆ ವಿರೋಧಿಸಿ ಮುಷ್ಕರಗಳನ್ನು ಹಮ್ಮಿಕೊಂಡರು. ಭ್ರಷ್ಟಾಚಾರ, ಅವ್ಯವಹಾರ, ಲಂಚ ಪ್ರಕರಣದ ವಿರುದ್ಧ ಪ್ರತಿಭಟನೆ ನಡೆಸುವಲ್ಲಿ ನಾಯಕತ್ವವಹಿಸಿ ಸಮಾಜ ಸುಧಾರಕರಾಗಿ ದುಡಿದರು.

ಮುಂಬರುವ ಏಪ್ರಿಲ್‌ಗೆ ಶತಾಯುಷಿಯಾಗಲಿರುವ ಇವರು, ಬೆಂಗಳೂರಿನಲ್ಲಿ ಕಸ ವಿಲೇವಾರಿ ಸಮಸ್ಯೆ ಪರಿಹಾರ ಕಂಡುಕೊಳ್ಳುವಲ್ಲಿ ನಿರಂತರ ಪ್ರಯತ್ನ ನಡೆಸಿದರು. ಯಾರಿಗೆ ಅಧಿಕಾರ, ಹಣದ ದಾಹವಿರದೇ ಸಮಾಜದ ಒಳಿತಿಗೆ ಹೋರಾಡುತ್ತಾರೆಯೋ ಅವರೇ ನಿಜವಾದ ಸಮಾಜ ಸುಧಾರಕರು ಎಂದು ತಮ್ಮದೇ ಭಾಷೆಯಲ್ಲಿ ಹೇಳುತ್ತಾರೆ.

ಕವನ,ಜಿಪಿಆರ್

ಸಂಖ್ಯೆ 128/248

# ಅಕ್ಟೋಬರ್ 2 ರಂದು
# ರಾಜ್ಯಾದ್ಯಂತ ಮಾತೃಪೂರ್ಣ ಯೋಜನೆಗೆ ಚಾಲನೆ

**ಬೆಂಗಳೂರು, ಸೆಪ್ಟೆಂಬರ್ 26 ( ಕರ್ನಾಟಕ ವಾರ್ತೆ) :**

ಗರ್ಭಿಣಿ ಮತ್ತು ಬಾಣಂತಿಯರಲ್ಲಿ ರಕ್ತಹೀನತೆ ತಡೆಗಟ್ಟಿ ಕಡಿಮೆ ತೂಕದ ಮಕ್ಕಳ ಜನನ ಪ್ರಮಾಣ ನಿಯಂತ್ರಿಸುವುದು ಮತ್ತು ತಾಯಿ ಮಗುವಿನ ಆರೋಗ್ಯದಲ್ಲಿ ಪೋಷಕಾಂಶಗಳ ಪ್ರಮಾಣವನ್ನು ತೀವ್ರಗತಿಯಲ್ಲಿ ಹೆಚ್ಚಿಸುವ ಸಲುವಾಗಿ "ಮಾತೃಪೂರ್ಣ" ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ ಒದಗಿಸುವ ಮಧ್ಯಾಹ್ನದ ಒಂದು ಪೌಷ್ಠಿಕ ಬಿಸಿಯೂಟ ಕಾರ್ಯಕ್ರಮವನ್ನು ಅಕ್ಟೋಬರ್ 2ರಂದು ರಾಜ್ಯಾದ್ಯಂತ ವಿಸ್ತರಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಉಮಾ ಮಹಾದೇವನ್ ಅವರು ತಿಳಿಸಿದರು.

ಖಾಸಗಿ ಹೋಟೆಲ್‌ನಲ್ಲಿ ಇಂದು ಮಾತೃಪೂರ್ಣ ಯೋಜನೆಯ ಕುರಿತು ಮಾಧ್ಯಮದವರಿಗೆ ಸಮಗ್ರ ಮಾಹಿತಿ ನೀಡುವ ಸಲುವಾಗಿ ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನ್ನಾಡಿದ ಪ್ರಧಾನ ಕಾರ್ಯದರ್ಶಿ ಉಮಾ ಮಹಾದೇವನ್ ಅವರು ಅವರು, ಈ ಯೋಜನೆಯು ರಾಜ್ಯದ 204 ಶಿಶು ಅಭಿವೃದ್ಧಿ ಯೋಜನೆಗಳಲ್ಲಿನ 12 ಲಕ್ಷ ಅರ್ಹ ಫಲಾನುಭವಿಗಳಿಗೆ 65,911 ಅಂಗನವಾಡಿ ಕೇಂದ್ರಗಳ ಮೂಲಕ ತಲುಪುವ ಗುರಿ ಹೊಂದಲಾಗಿದ್ದು, ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿಯೆಂದು ನೋಂದವಣೆ ಹೊಂದಿದ ತಕ್ಷಣದಿಂದ ಹೆರಿಗೆಯಾದ ಆರು ತಿಂಗಳವರೆಗಿನ ಬಾಣಂತಿಯರು ಈ ಯೋಜನೆಯ ಪ್ರಯೋಜನ ಪಡೆಯಲಿದ್ದಾರೆ ಎಂದರು.

ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದಡಿ ಮಧ್ಯಾಹ್ನದ ಆಹಾರದಲ್ಲಿ ಗರ್ಭಿಣಿ ಹಾಗೂ ಬಾಣಂತಿಯರಿಗೆ ಪ್ರತಿದಿನ 600 ಕ್ಯಾಲರಿಯಂತೆ ಮತ್ತು 18 ರಿಂದ 20 ಗ್ರಾಂ ಪ್ರೋಟಿನ್ ಒಳಗೊಂಡ ಆಹಾರವನ್ನು ವಾರದಲ್ಲಿ ಆರು ದಿನಗಳು ನೀಡಲಾಗುವುದು ಎಂದು ತಿಳಿಸಿದ ಅವರು, ಗರ್ಭಿಣಿಯರು ಪ್ರತಿದಿನ ಊಟದಲ್ಲಿ 2580 ಕ್ಯಾಲರಿ, 78 ಪ್ರೋಟಿನ್ ಹಾಗೂ 1200 ಮೀ.ಗ್ರಾಂ ಕ್ಯಾಲಿಶಂ ಸೇವಿಸುವುದು ಅವಶ್ಯವಿರುತ್ತದೆ ಎಂದು ತಿಳಿಸಿದರು.

ಮುಂದುವರೆದು ಮಾತನಾಡಿದ ಅವರು ಈ ಕಾರ್ಯಕ್ರಮದಡಿ ನೀಡಲು ಉದ್ದೇಶಿಸಿರುವ ಮಧ್ಯಾಹ್ನದ ಪೌಷ್ಠಿಕ ಊಟದಲ್ಲಿ ಅನ್ನ, ಸಾಂಬರ್, ಪಲ್ಯದ ಜೊತೆ ಬೇಯಿಸಿದ ಮೊಟ್ಟೆ ಮತ್ತು 200 ಮೀ. ಲಿ. ಹಾಲು ಹಾಗೂ ಬೆಲ್ಲ ಹಾಗೂ ಕಡಲೆ ಬೀಜದಿಂದ ಮಾಡಿದ ಚಿಕ್ಕಿಯನ್ನು ತಿಂಗಳಿಗೆ 25 ದಿನ ನೀಡಲಾಗುವುದು. ಮೊಟ್ಟೆ ತಿನ್ನದ ಗರ್ಭಿಣಿ/ಬಾಣಂತಿಯರಿಗೆ ಮೊಳಕೆ ಭರಿಸಿದ ಕಾಳನ್ನು ನೀಡಲಾಗುವುದು. ಇದರಿಂದಾಗಿ ಗರ್ಭಿಣಿ ಮತ್ತು ಹಾಲುಣಿಸುವ ತಾಯಂದಿರಿಗೆ ಒಂದು ದಿನಕ್ಕೆ ಬೇಕಾಗುವ ಪ್ರೋಟಿನ್ ಮತ್ತು ಕ್ಯಾಲ್ಷಿಯಂ ಕ್ಯಾಲರಿ ಅಂಶಗಳಲ್ಲಿ ಸುಮಾರು 40–45% ಅಂಶಗಳಷ್ಟು ಈ ಒಂದು ಪೂರ್ಣ ಪೌಷ್ಠಿಕ ಊಟದಿಂದ ಒದಗಿಸಿದಂತಾಗುತ್ತದೆ, ಇದರ ಜೊತೆ ಕಬ್ಬಿಣ ಅಂಶದ ಮಾತ್ರೆಗಳನ್ನು ಸೇವಿಸುವಂತೆ ಪ್ರೋತ್ಸಾಹಿಸಿ ಬೆಂಬಲಿಸಲಾಗುವುದು ಎಂದರು.

ಇಲಾಖೆಯ ನಿರ್ದೇಶಕರಾದ ದೀಪಾ ಚೋಳನ್ ಅವರು ಮಾತನಾಡಿ, ಗರ್ಭಿಣಿ/ಬಾಣಂತಿಯರನ್ನು ಕೆಲವು ಕುಟುಂಬಗಳಲ್ಲಿ ಹೊರಬಿಡದ ಸಂದರ್ಭಗಳು ಹೆಚ್ಚು. ಇಂತಹ ಪರಿಸ್ಥಿತಿಯಲ್ಲಿ 45 ದಿನಗಳವರೆಗೆ ಕುಟುಂಬ ಸದಸ್ಯರು ಯಾರಾದರೂ ಟಿಫಿನ್ ಡಬ್ಬಿಯಲ್ಲಿ ಪೌಷ್ಠಿಕ ಆಹಾರವನ್ನು ಮನೆಗೆ ಕೊಂಡೊಯ್ಯಲು ಅವಕಾಶ ಒದಗಿಸಲಾಗಿದೆ ಎಂದರು.

ಗಾರ್ಮೆಂಟ್ಸ್ ಮತ್ತಿತರ ಖಾಸಗಿ ಸಂಸ್ಥೆಗಳಲ್ಲಿ ದುಡಿಯುವಂತಹ ಗರ್ಭಿಣಿಯರು ಮಧ್ಯಾಹ್ನ ಪೂರ್ಣ ಪೌಷ್ಠಿಕ ಆಹಾರ ಸೇವಿಸಲು ಅನುವಾಗುವಂತೆ ಒಂದು ಗಂಟೆಗಳ ಕಾಲ ಬಿಡುವು ನೀಡಲು ಅನುಮತಿ ನೀಡುವಂತೆ ಸಂಸ್ಥೆಯ ಮಾಲೀಕರ ಜೊತೆ ಇಲಾಖೆಯ ಅಧಿಕಾರಿಗಳು ಮಾತುಕತೆ ನಡೆಸುವರು ಎಂದರು.

ಮೂವತ್ತು ವಿಷಯಗಳ ಕುರಿತಂತೆ ವಾರದಲ್ಲಿ ಒಂದು ದಿನ ಗರ್ಭಿಣಿ ಮತ್ತು ಬಾಣಂತಿಯರಿಗೆ ಮಾತೃಪೂರ್ಣ ಸಮಾಲೋಚನೆ ನಡೆಸಲಾಗುವುದು ಎಂದು ತಿಳಿಸಿದ ಅವರು, ಅಂಗನವಾಡಿಗಳಲ್ಲಿ ನೈರ್ಮಲ್ಯ ಕಾಪಾಡುವ ಹಿನ್ನೆಲೆಯಲ್ಲಿ ಈ ವರ್ಷಾಂತ್ಯದಲ್ಲಿ ಎಲ್ಲ ಅಂಗನವಾಡಿಗಳಲ್ಲಿ ಶೌಚಾಲಯವನ್ನು ನಿರ್ಮಿಸಲಾಗುವುದು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಯುನಿಸೆಫ್ ಸಹಯೋಗದಲ್ಲಿ ಈ ಯೋಜನೆ ಜಾರಿಗೊಳಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಯುನಿಸೆಫ್‌ನ ಪೌಷ್ಠಿಕ ಆಹಾರ ತಜ್ಞೆ ಡಾ. ಖಯಾತಿ ತಿವಾರಿ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಡಾ. ರಾಜ್‌ಕುಮಾರ್ ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

*****

ಮಮತಾ/ಜಿಪಿಆರ್

ಸಂಖ್ಯೆ 129/249

**ಕಳೆದ ನಾಲ್ಕು ವರ್ಷಗಳಲ್ಲಿ ಒಟ್ಟು 712 ಕ್ರೀಡಾಪಟುಗಳಿಗೆ**
**ರೂ. 12.71 ಕೋಟಿ ನಗದು ಪುರಸ್ಕಾರ – ಸಚಿವ ಪ್ರಮೋದ್ ಮಧ್ವರಾಜ್**

**ಬೆಂಗಳೂರು, ಸೆಪ್ಟೆಂಬರ್ 26 ( ಕರ್ನಾಟಕ ವಾರ್ತೆ) :**

2013 ರಿಂದ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಸಾಧನೆಗೆ ನಗದು ಪುರಸ್ಕಾರ ಮೊತ್ತವನ್ನು ನಿಗದಿಪಡಿಸಲಾಗಿದ್ದು, ರಾಜ್ಯದ ಕ್ರೀಡಾ ಕ್ಷೇತ್ರದಲ್ಲಿ ಇದೊಂದು ಮಹತ್ವದ ಮೈಲುಗಲ್ಲಾಗಿದೆ. ಕಳೆದ ನಾಲ್ಕು ವರ್ಷಗಳಲ್ಲಿ 711 ಕ್ರೀಡಾಪಟುಗಳಿಗೆ 12.71 ಕೋಟಿ ರೂ. ನಗದು ಪುರಸ್ಕಾರ ಮೊತ್ತವನ್ನು ವಿತರಿಸಲಾಗಿದ್ದು, ಶೀಘ್ರದಲ್ಲೇ ಇನ್ನೂ 9.35 ಕೋಟಿ ರೂ. ಗಳ ಮೊತ್ತದ ನಗದು ಪುರಸ್ಕಾರ ಮೊತ್ತವನ್ನು ವಿತರಿಸಲಾಗುವುದು ಎಂದು ಯುವಜನ, ಕ್ರೀಡಾ ಹಾಗೂ ಮೀನುಗಾರಿಕಾ ಸಚಿವ ಪ್ರಮೋದ್ ಮಧ್ವರಾಜ್ ಅವರು ತಿಳಿಸಿದರು.

ಅವರು ಇಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಯೋಜನೆಗಳನ್ನು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ತಲುಪಿಸಲು ಮಾಧ್ಯಮಗಳ ಪ್ರತಿನಿಧಿಗಳೊಂದಿಗೆ ಸಂವಾದ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡುತ್ತಾ, 2015 ರಿಂದ ರಾಷ್ಟ್ರೀಯ ಕ್ರೀಡಾ ಕೂಟಗಳಲ್ಲಿ ಪದಕ ವಿಜೇತರಿಗೆ ನೀಡಲಾಗುತ್ತಿದ್ದ ನಗದು ಪುರಸ್ಕಾರ ಮೊತ್ತವನ್ನು ಪರಿಷ್ಕರಿಸಿ ಚಿನ್ನದ ಪದಕ ವಿಜೇತರಿಗೆ 5.00 ಲಕ್ಷ ರೂ. ಬೆಳ್ಳಿ ಪದಕ ವಿಜೇತರಿಗೆ 3.00 ಲಕ್ಷ ರೂ. ಕಂಚಿನ ಪದಕ ವಿಜೇತರಿಗೆ 2.00 ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದರು.

ಒಲಂಪಿಕ್ ಕ್ರೀಡಾಕೂಟದಲ್ಲಿ ರಾಜ್ಯದ ಕ್ರೀಡಾಪಟುಗಳಿಗೆ ಚಿನ್ನ, ಬೆಳ್ಳಿ ಹಾಗೂ ಕಂಚು ವಿಜೇತರಿಗೆ ಕ್ರಮವಾಗಿ 5 ಕೋಟಿ ರೂ., ಬೆಳ್ಳಿ 3 ಕೋಟಿ ರೂ. ಹಾಗೂ 2 ಕೋಟಿ ರೂಗಳನ್ನು ನಮ್ಮ ಸರ್ಕಾರದಿಂದ ನೀಡಲಾಗುವುದು ಎಂದರು.

ಯುವಜನರ ಸರ್ವತೋಮುಖ ಅಭಿವೃದ್ಧಿಗೆ ಯುವಶಕ್ತಿ ಕೇಂದ್ರ ಕಾರ್ಯಕ್ರಮ, ಯುವ ಸ್ಪಂಧನಾ ಹಾಗೂ ನಮ್ಮೂರ ಶಾಲೆಗೆ ನಮ್ಮ ಯುವಜನರು ಎಂಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ.

ಇಲಾಖೆಯ ಮುಖಾಂತರ ವೃತ್ತಿ ಕೌಶಲ್ಯ ತರಬೇತಿ ಮತ್ತು ಉದ್ಯೋಗ ಮೇಳಗಳನ್ನು ಆಯೋಜಿಸಲಾಗಿದ್ದು ನಿರುದ್ಯೋಗಿ ಯುವಜನರಿಗೆ ಉದ್ಯೋಗವನ್ನು ಒದಗಿಸಲು ಉದ್ಯೋಗ ಮೇಳಗಳನ್ನು ಆಯೋಜಿಸಲಾಗುತ್ತದೆ. ಈಗಾಗಲೇ 68 ಕ್ಕೂ ಹೆಚ್ಚು ಉದ್ಯೋಗ ಮೇಳವನ್ನು ಆಯೋಜಿಸಿ 2400 ಕ್ಕೂ ಹೆಚ್ಚು ಯುವಜನರು ಹಾಗೂ 55 ಕ್ಕೂ ಹೆಚ್ಚು ಉದ್ಯೋಗ ನೀಡುವ ಸಂಸ್ಥೆಗಳು ಭಾಗವಹಿಸಿವೆ ಎಂದರು.

ಕ್ರೀಡಾ ಶಾಲೆ ಮತ್ತು ಕ್ರೀಡಾ ಅಕಾಡೆಮಿಗಳು ವೈಜ್ಞಾನಿಕ ಕ್ರೀಡಾ ತರಬೇತಿಗೆ ಒತ್ತು ನೀಡುತ್ತಿದ್ದು ಹೊಸ ಕ್ರೀಡಾ ಶಾಲೆಗಳ ಆರಂಭ ಹಾಗೂ ಜಾಗತಿಕ ಗುಣಮಟ್ಟದ ಕ್ರೀಡಾ ಸೌಲಭ್ಯ ಹೊಂದಿರುವ ಕ್ರೀಡಾ ಅಕಾಡೆಮಿಗಳಿಗೆ ಮಂಜೂರಾತಿ ನೀಡಲಾಗಿದೆ ಎಂದರು.

ಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಹಾಗೂ ಹಾಲಿ ಕ್ರೀಡಾಪಟುಗಳ ಮಾಸಾಶನವನ್ನು ಹೆಚ್ಚಿಸಲಾಗಿದೆ. ತರಬೇತಿದಾರರ ಜೀವನಕ್ಕೆ ಭದ್ರತೆ ಮತ್ತು ಕ್ರೀಡಾ ತರಬೇತಿಗೆ ಒತ್ತು ನೀಡಲಾಗಿದೆ. ಜುಲೈ 2017 ರಲ್ಲಿ ಬೆಂಗಳೂರಿನಲ್ಲಿ ಫೀಬಾ ಏಷಿಯನ್ ಮಹಿಳಾ ಬಾಸ್ಕೆಟ್ ಬಾಲ್ ಕ್ರೀಡಾಕೂಟವನ್ನು ಯಶಸ್ವಿಯಾಗಿ ಆಯೋಜಿಸಲಾಗಿದ್ದು, ಹತ್ತು ಕೋಟಿ ರೂ. ವೆಚ್ಚದಲ್ಲಿ ಶ್ರೀ ಕಂಠೀರವ ಕ್ರೀಡಾಂಗಣ ಮತ್ತು ಕೋರಮಂಗಲ ಒಳಾಂಗಣ ಕ್ರೀಡಾಂಗಣಗಳನ್ನು ಉನ್ನತೀಕರಿಸಲಾಗಿದೆ.

ಆಡಳಿತದಲ್ಲಿ ಪಾರದರ್ಶಕತೆ ತರಲು ಏಕಲವ್ಯ, ಜೀವಮಾನ ಸಾಧನೆ ಹಾಗೂ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿಗಳ ಆಯ್ಕೆಗೆ ಹಿರಿಯ ಮಾಜಿ ಕ್ರೀಡಾಪಟುಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲಾಗಿದೆ.

ಯುವಜನರಿಗೆ ಉದ್ಯೋಗ ಸೃಷ್ಟಿಗಾಗಿ ನಮ್ಮ ಇಲಾಖೆಯ ಅಧೀನದ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯು 1989 ರಲ್ಲಿ ಸ್ಥಾಪನೆಯಾಗಿದ್ದು, ಸಾಹಸ ಕ್ರೀಡಾ ಕ್ಷೇತ್ರದಲ್ಲಿ ಪರಿಣಿತ ಸಂಸ್ಥೆಯಾಗಿದೆ.

ಪರಿಶಿಷ್ಟ ಜಾತಿ ಮತ್ತು ಪಂಗಡ ಯೋಜನಾ ಕ್ರೀಡಾಪಟುಗಳ ಕಲ್ಯಾಣಕ್ಕೆ ಅಗತ್ಯ ತರಬೇತಿ ಹಾಗೂ ಆರ್ಥಿಕ ಸಹಾಯ, ಉದ್ಯೋಗ ಅವಕಾಶವನ್ನು ಹೆಚ್ಚಿಸಲು ವೃತ್ತಿಪರ ತರಬೇತಿಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ವಿಕಲಚೇತನ ಕ್ರೀಡಾಪಟುಗಳಿಗೆ, ಕ್ರೀಡಾಂಣಗಳನ್ನು ವಿಕಲಚೇತನ ಸ್ನೇಹಿಯಾಗಿಸಲು 2 ಕೋಟಿ ರೂ. ಮತ್ತು ಕ್ರೀಡಾ ಕಿಟ್ ಒದಗಿಸಲು 2 ಕೋಟಿ ರೂ. ಗಳನ್ನು ನೀಡಲಾಗಿದೆ.

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯನ್ನು ಪ್ರತಿವರ್ಷ ಹತ್ತು ಜನ ಕ್ರೀಡಾ ಪ್ರವರ್ತಕರನ್ನು ಗುರುತಿಸಿ ಗೌರವಿಸಲು ಪ್ರಸಕ್ತ ವರ್ಷದಿಂದ ತಲಾ 5 ಲಕ್ಷ ರೂ. ಗಳ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯನ್ನು ನೀಡಲಾಗುವುದು ಎಂದು.

ಈ ಕಾರ್ಯಕ್ರಮದಲ್ಲಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಸಂಜೀವ್‌ಕುಮಾರ್, ನಿರ್ದೇಶಕರು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ವಿಜಯಾನಂದ/ಜಿಪಿಅರ್

ಸಂಖ್ಯೆ 130/250

# ವಿದ್ಯಾರ್ಥಿಗಳು ವಾಸಿಸಲು ಯೋಗ್ಯವುಳ್ಳ ಸುಸಜ್ಜಿತ ಕಟ್ಟಡ ಬಾಡಿಗೆಗೆ ಬೇಕು

**ಬೆಂಗಳೂರು, ಸೆಪ್ಟೆಂಬರ್ 26 ( ಕರ್ನಾಟಕ ವಾರ್ತೆ) :**

**ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಧನ್ವಂತರಿ ರಸ್ತೆ, ಬೆಂಗಳೂರು –9 ಇಲ್ಲಿ ವ್ಯಾಸಂಗ ಮಾಡುತ್ತಿರುವ ಸುಮಾರು ನಲವತ್ತು (40) ಪುರುಷ ವಿದ್ಯಾರ್ಥಿಗಳು ವಾಸಿಸಲು ಯೋಗ್ಯವುಳ್ಳ ಈ ಸಂಸ್ಥೆಯಿಂದ ಸುಮಾರು 10 ಕಿಲೋ ಮೀಟರ್ ವ್ಯಾಪ್ತಿಯಲ್ಲಿರುವ ಉತ್ತಮ ಬಸ್ ಸೌಕರ್ಯವುಳ್ಳ, ಮೆಟ್ರೋ ನಿಲ್ದಾಣದ ಸಮೀಪವಿರುವ ಒಂದು ಸುಸಜ್ಜಿತ ಕಟ್ಟಡವು ಬೇಕಾಗಿದ್ದು, ಮಾಹೆಯಾನ ಬಾಡಿಗೆ ಆಧಾರದ ಮೇಲೆ ನೀಡಲು ಆಸಕ್ತಿವುಳ್ಳವರು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯರರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.**

*****

ಜೆಡಿ:ಜಿಪಿಆರ್

**ಸಂಖ್ಯೆ 131/251**

# ಎಸ್.ಎಸ್.ಎಲ್.ಸಿ. ಪರೀಕ್ಷೆ : ಅವಧಿ ವಿಸ್ತರಣೆ

**ಬೆಂಗಳೂರು, ಸೆಪ್ಟೆಂಬರ್ 26 ( ಕರ್ನಾಟಕ ವಾರ್ತೆ) :**

**2018ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಕುಳಿತುಕೊಳ್ಳುವ ಅಭ್ಯರ್ಥಿಗಳ ನೊಂದಣಿ, ಪರೀಕ್ಷಾ ಶುಲ್ಕ ಹಾಗೂ ನಾಮಿನಲ್ ರೋಲ್ ಪ್ರಸ್ತಾವನೆಗಳನ್ನು ಸಲ್ಲಿಸುವ ದಿನಾಂಕಗಳನ್ನು ವಿಸ್ತರಿಸಲಾಗಿದೆ.**

**ಅಕ್ಟೋಬರ್ 9 ಖಾಸಗಿ ಅಭ್ಯರ್ಥಿಗಳಾಗಿ ಜಿಲ್ಲಾ ಉಪ ನಿರ್ದೇಶಕರ ಕಚೇರಿಯಲ್ಲಿ ನೋಂದಣಿ ಮಾಡಲು, ಅಕ್ಟೋಬರ್ 10 ರಂದು ಶಾಲೆಯವರು ಶಾಲಾ/ಖಾಸಗಿ/ಪುರಾವರ್ತಿತ ಅಭ್ಯರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕಾರ, ಅಕ್ಟೋಬರ್ 11 ರಂದು ಪರೀಕ್ಷಾ ಶುಲ್ಕ ಬ್ಯಾಂಕಿಗೆ**

ಎನ್‌ಇಎಫ್‌ಟಿ ಚಲನ್ ಮೂಲಕ ಜಮೆ ಮಾಡಲು ಹಾಗೂ ಅಕ್ಟೋಬರ್ 12 ರಂದು ನಾಮಿನಲ್ ರೋಲ್ ಪ್ರಸ್ತಾವನೆ ಹಾಗೂ ಬ್ಯಾಂಕ್ ಚಲನ್‌ನ ಮೂಲ ಪ್ರತಿಯನ್ನು ಶಾಲೆಗಳಿಂದ ಮಂಡಳಿಗೆ ತಲುಪಿಸುವುದು.

ಕೆಎನ್‌ಕೆ:ಜಿಪಿಆರ್.